**<u>ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ ಸೇಡಂ</u>**

**CC No. 16/2024**

**(ಇಂದು ದಿಃ 08-01-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

| | | | |
|---|---|---|---|
| ಹೆಸರು ಶ್ರೀ/ಶ್ರೀಮತಿ | ಮಹ್ಮದ್ ಖಾಜ | CW-1 | PW-4 |
| ತಂದೆ/ಗಂಡನ ಹೆಸರು | ಮಹ್ಮದ್ ಮೌಲಾನ | | |
| ವಯಸ್ಸು | 40 ವರ್ಷ | | |
| ಉದ್ಯೋಗ | ಚಾಲಕ | | |
| ವಾಸ ಸ್ಥಳ | ಕೊಂತನಪಲ್ಲಿ ಗೇಟ್, ತಾಃ ಸೆಡೇಂ | | |

**<u>ಮುಖ್ಯ ವಿಚಾರಣೆಃ- ಸಹಾಯಕ ಸರ್ಕಾರಿ ಅಭೀಯೋಜಕರಿಂದಃ-</u>**

ಸಾಕ್ಷಿಗೆ ದೂರನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು , ದೂರನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-2 ರ ಪ್ರಕಾರ ಪೋಲಿಸರು ಪ್ರಕರಣ ದಾಖಲು ಮಾಡಿದ್ದು , FIR ಅನ್ನು ನಿಪಿ-3 ಎಂದು ಗುರುತಿಸಲಾಯಿತು. ಆರೋಪಿ ನಮ್ಮ ಮನೆ ಪಕ್ಕದವರು . ಆರೋಪಿ ಮತ್ತು ನಮ್ಮ ನಡುವೆ ಯಾವುದೇ ಗಲಾಟೆ ಆಗಿಲ್ಲ. ನನಗೆ ನಿಪಿ-2 ರ ಸಂಗತಿಗಳು ಗೊತ್ತಿಲ್ಲ.

**ಮುಂದುವರೆದ ಮುಖ್ಯ ವಿಚಾರಣೆ ಇಲ್ಲ.**

**(ಈ ಹಂತದಲ್ಲಿ ಸ.ಸ.ಅ. ರವರ ವಿನಂತಿ ಮೇರೆಗೆ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.)**

**<u>ಪಾಟೀ ಸವಾಲುಃ- ಸಹಾಯಕ ಸರ್ಕಾರಿ ಅಭೀಯೋಜಕರಿಂದಃ-</u>**

4 ವರ್ಷಗಳ ಹಿಂದೆ ನಾನು ಮತ್ತು ಚಾಸಾ-1 ಮತ್ತು ಆರೋಪಿಗಳ ನಡುವೆ ಕೊಂತನಪಲ್ಲಿ ಗೇಟನಲ್ಲಿರುವ ಚಸಾ-5 ರ ಹೊಟೇಲ್‌ನಲ್ಲಿ ಬೆಳಿಗ್ಗೆ ಗಲಾಟೆಯಾಗಿತ್ತು ಎಂದರೆ ಸರಿಯಲ್ಲ. ಚಾಸಾ-4ರವರಿಗೆ 3 ನೇ ಆರೋಪಿ ಕೈಯಿಂದ ಹೊಡೆದಿದ್ದಾರೆ ಎಂದರೆ ಸರಿಯಲ್ಲ. 1 ಮತ್ತು 2ನೇ ಆರೋಪಿಗಳು ನನಗೆ ಹೊಡೆದರು ಎಂದರೆ ಸರಿಯಲ್ಲ. ಚಸಾ-5 ಗಲಾಟೆ ಬಿಡಿಸಿದರು ಎಂದರೆ ಸರಿಯಲ್ಲ. ಗಲಾಟೆ ಆಗುವಾಗ ಚಾಸಾ-7 ಮತ್ತು 8 ಇದ್ದರು ಎಂದರೆ ಸರಿಯಲ್ಲ. ಅವರು ಜಗಳ ಬಿಡಿಸಿದರು ಎಂದರೆ ಸರಿಯಲ್ಲ. ಜಗಳ ಮುಗಿಸಿ ಹೋಗುವಾಗ ಆರೋಪಿಗಳು ಜೀವ ಬೆದರಿಕೆ

ಹಾಕಿದ್ದಾರೆ ಎಂದರೆ ಸರಿಯಲ್ಲ, ಆರೋಪಿಗಳು ಬೈದರು ಎಂದು ಚಾಸಾ-6 ವಿಷ ಕುಡಿದಿದ್ದರು ಎಂದರೆ ಸರಿಯಲ್ಲ, ನಂತರ ಅವರನ್ನು ಮುಧೋಳ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋದೇವು ಎಂದರೆ ಸರಿಯಲ್ಲ.

ನಾನು ಮತ್ತು ಆರೊಪಿ ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ . ಕಾರಣ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳ್ಚು ಮಾಡಿಸಲಾಯಿತು)

**ಓ.ಹೇ.ಕೇ. ಸರಿ ಇದೆ.**

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ, ಸೇಡಂ.**